ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಕಡೂರು ತಾಲ್ಲೂಕನ್ನು ಈಗ ಬರಗಾಲ ಪೀಡಿತ ತಾಲ್ಲೂಕು ಎಂದು ಘೋಷಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕು ನಿಡಿಘಟ್ಟದ ಬಳಿ ಇರುವ ಹಿರೇಕೊಟ್ಟು ಒಡ್ಡಕೆರೆಯಿಂದ ನಾಗರಹಾಲ್ ಕೆರೆಗೆ ಪೋಷಕ ನಾಲೆ ನಿರ್ಮಿಸಲು ಪ್ರಸ್ತುತ ಸಾಲಿನ ಬರಪರಿಹಾರ ಕಾಮಗಾರಿಯಡಿ ಮತ್ತು ಸಂಪೂರ್ಣ ಗ್ರಾಮೀಣ ರೋಜಗಾರ್ ಯೋಜನೆಯಡಿಯಲ್ಲಿ ಸೇರಿಸಿ ಕ್ರಮ ಕೈಗೊಳ್ಳಲಾಗುವುದು. ಈ ಪೋಷಕ ನಾಲೆ ನಿರ್ಮಿಸಲು ಸುಮಾರು 10.00 ಲಕ್ಷ ರೂಗಳ ಅಂದಾಜು ಮಾಡಲಾಗಿದೆ.

## ಬಸವಕಲ್ಯಾಣ ಕ್ಷೇತ್ರದಲ್ಲಿ ಸ್ವಚ್ಛಗ್ರಾಮ ಯೋಜನೆ.

100(868) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ "ಸ್ವಚ್ಛಗ್ರಾಮ" ಯೋಜನೆಗಾಗಿ ಆಯ್ಕೆ ಮಾಡಲಾದ ಗ್ರಾಮಗಳಾವುವು; ಈ ಗ್ರಾಮಗಳಲ್ಲಿನ ಜನರು ಸದರಿ ಯೋಜನೆಗೆ ತಮ್ಮ ಪಾಲಿನ ಶೇ.10ರಷ್ಟು ಹಣವನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರವು ಸದರಿ ಯೋಜನೆಗೆ ತನ್ನ ಪಾಲಿನ ಹಣವನ್ನು ಭೂಸೇನಾ ನಿಗಮಕ್ಕೆ ನೀಡಿರುವುದು ನಿಜವೆ?

ಇ) ಹಾಗಿದ್ದಲ್ಲಿ, ಈ ಗ್ರಾಮಗಳಲ್ಲಿ ಈ ಯೋಜನೆಯನ್ನು ಪ್ರಾರಂಭಿಸಲಾಗಿದೆಯೇ?

ಈ) ಇಲ್ಲದಿದ್ದಲ್ಲಿ ಕಾರಣಗಳೇನು? ಭೂಸೇನಾ ನಿಗಮದವರು ಈ ಯೋಜನೆಗೆ ಹಣದ ಕೊರತೆಯಿರುವುದಾಗಿ ತಿಳಿಸಿರುವುದು ನಿಜವೇ?

ಉ) ಹಾಗಿದ್ದಲ್ಲಿ, ಈ ಯೋಜನೆಯನ್ನು ಶೀಘ್ರಗತಿಯಲ್ಲಿ ಪ್ರಾರಂಭಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಸಚಿವರು):

ಅ) ಬಸವಕಲ್ಯಾಣ ಕ್ಷೇತ್ರದಲ್ಲಿ ಸ್ವಚ್ಛಗ್ರಾಮ ಯೋಜನೆಯಡಿ 8 ಗ್ರಾಮಗಳನ್ನು ಅಂದರೆ (1) ಬೋಸ್ಗಾ (2) ಅಲ್ಲೂಡ (3) ನೀರ್‌ಗುಡಿ (4) ಕೋಹಿನೂರು (5) ಕಿಟ್ಟಾ (6) ಲಾಡವಂತಿ (7) ತಳಭೋಗ ಮತ್ತು (8) ಬೆಟಗೇರಾ ಆಯ್ಕೆ ಮಾಡಲಾಗಿದ್ದು, ಗ್ರಾಮಸ್ಥರಿಂದ ಶೇ. 5 ರಷ್ಟು ವಂತಿಗೆ (ಅಂದರೆ ಪ್ರತಿ ಗ್ರಾಮದಿಂದ ತಲಾ ರೂ. 1.00 ಲಕ್ಷದಂತೆ) ಮೊದಲನೇ ಕಂತಾಗಿ ಸಂಗ್ರಹವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸ್ವಚ್ಛಗ್ರಾಮ ಯೋಜನೆಯನ್ನು 1296 ಗ್ರಾಮಗಳಲ್ಲಿ ಅನುಷ್ಠಾನಗೊಳಿಸುವುದಕ್ಕಾಗಿ, ಸರ್ಕಾರದ ಪಾಲಿನ ರೂ. 25.92 ಕೋಟಿಗಳ ಪೈಕಿ ಕರ್ನಾಟಕ ಭೂಸೇನಾ ನಿಗಮಕ್ಕೆ ರೂ. 11.70 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಇ) ಬೋಸ್ಗಾ ಗ್ರಾಮದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ.

ಈ) ಸ್ವಚ್ಛಗ್ರಾಮ ಸಮಿತಿಗಳು ಕೈಗೆತ್ತಿಕೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ತೀರ್ಮಾನ ತೆಗೆದುಕೊಳ್ಳುವುದರಲ್ಲಿ ವಿಳಂಬವಾದ್ದರಿಂದ, ಕಾಮಗಾರಿಗಳನ್ನು ಪ್ರಾರಂಭಿಸುವಲ್ಲಿ ವಿಳಂಬವಾಗಿದೆ. ಭೂಸೇನಾ ನಿಗಮವು ಯೋಜನೆಯ ಅನುಷ್ಠಾನಕ್ಕಾಗಿ ಎರಡನೇ ಕಂತಿನ ಸಾಲದ ಬಿಡುಗಡೆಗಾಗಿ ಕೋರಿದ್ದು, ಅದೇ ಪ್ರಕಾರ ಸರ್ಕಾರವು ರೂ. 50.00 ಕೋಟಿಗಳನ್ನು ನಿಗಮಕ್ಕೆ ಬಿಡುಗಡೆ ಮಾಡಲು ಹಣಕಾಸು ಸಚಿವರಿಗೆ ತಿಳಿಸಿದೆ.

ಉ) ಸ್ವಚ್ಛಗ್ರಾಮ ಯೋಜನೆಯನ್ನು ಶೀಘ್ರಗತಿಯಲ್ಲಿ ಅನುಷ್ಠಾನಗೊಳಿಸುವುದಕ್ಕಾಗಿ, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಆಯಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿವಾರ್ಹಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ "ಜಿಲ್ಲಾ ಸ್ವಚ್ಛಗ್ರಾಮ ಅನುಷ್ಠಾನ ಸಮಿತಿ" ಗಳನ್ನು ರಚಿಸಲಾಗಿದೆ.

**ಸೇಡಂ ತಾಲ್ಲೂಕಿನ ಲಿಂಗಂಪಲ್ಲಿ ಗ್ರಾಮಪಂಚಾಯಿತಿ ಬನ್ನೂರು ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿ**

101(791) ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ(ಸೇಡಂ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1. ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ಲಿಂಗಂಪಲ್ಲಿ ಗ್ರಾಮ ಪಂಚಾಯಿತಿಯ ಬನ್ನೂರು ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಯ ಕಳಪೆ ಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಇಂತಹ ಕಳಪೆ ದರ್ಜೆ ಕೆಲಸ ಯಾವ ಅಧಿಕಾರಿಗಳ ಉಸ್ತುವಾರಿಯಲ್ಲಿ ಮಾಡಲಾಗಿದೆ; ಅಂತಹ ಅಧಿಕಾರಿಯವರ ಮೇಲೆಯಾಗಲೀ, ಗುತ್ತಿಗೆದಾರರ ಮೇಲಾಗಲೀ ಕ್ರಮ ಕೈಗೊಳ್ಳಲಾಗಿದೆಯೇ?

ಶ್ರೀ ಎಂ.ವೈ. ಘೋರ್ಪಡೆ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

1. ಇಲ್ಲ.

2. ಅನ್ವಯಿಸುವುದಿಲ್ಲ.

**ಕೊರಟಗೆರೆ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳು**

103(790) ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ)) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1. ಕೊರಟಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ 1999-2000ನೇ ಸಾಲಿನಿಂದ ಈವರೆಗೆ ವಿವಿಧ ಯೋಜನೆಗಳಡಿಯಲ್ಲಿ ಪ್ರತಿ ಗ್ರಾಮ ಪಂಚಾಯಿತಿಯಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು?

2. ಇವುಗಳಿಗೆ ಮಂಜೂರಾದ ಹಣವೆಷ್ಟು; ಎಷ್ಟು ಹಣ ಖರ್ಚು ಮಾಡಲಾಗಿದೆ; ಪ್ರತಿ ಗ್ರಾಮ ಪಂಚಾಯಿತಿಗಳ ಕಾಮಗಾರಿಗಳ ಬಗ್ಗೆ ಮಾಹಿತಿ ನೀಡುವುದು?

3. ಈ ಕಾಮಗಾರಿಗಳ ಪ್ರಗತಿ ಈಗ ಯಾವ ಹಂತದಲ್ಲಿದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

1. ಕೊರಟಗೆರೆ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ನೆಲಮಂಗಲ ತಾಲ್ಲೂಕಿನಲ್ಲಿ 14 ಗ್ರಾಮ ಪಂಚಾಯ್ತಿಗಳಿದ್ದು 1999-2000 ನೇ ಸಾಲಿನಿಂದ 2001-02ನೇ ಸಾಲಿನವರೆಗೆ ವಿವಿಧ ಯೋಜನೆಗಳಡಿಯಲ್ಲಿ ಪ್ರತಿ ಗ್ರಾಮ ಪಂಚಾಯ್ತಿಗೆ ಬಿಡುಗಡೆಯಾದ ಮತ್ತು ಖರ್ಚು ಮಾಡಲಾದ ವಿವರಗಳನ್ನು ಮಾನ್ಯ ಸದಸ್ಯರಾದ ಶ್ರೀ ಸಿ.ಚನ್ನಿಗಪ್ಪ ಅವರಿಗೆ ಒದಗಿಸಲಾಗಿದೆ. ಈ ಅನುದಾನದಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳೆಂದರೆ, ಗ್ರಾಮ ನೈರ್ಮಲ್ಯ ಕಾಮಗಾರಿ, ಗ್ರಾಮ ಪಂಚಾಯ್ತಿ ಕಟ್ಟಡ ನಿರ್ಮಾಣ, ರಸ್ತೆ ಅಭಿವೃದ್ಧಿ, ಬೀದಿ ದೀಪಗಳ ಸೌಲಭ್ಯ ಕಲ್ಪಿಸುವುದು, ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವುದು, ಅಂಗನವಾಡಿ ಹಾಗೂ ಶಾಲಾ ಕಟ್ಟಡಗಳ ದುರಸ್ತಿ, ಗ್ರಾಮಗಳಲ್ಲಿ ಚರಂಡಿ ಹಾಗೂ ಮೋರಿ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.